ತೀರ್ಥಹಳ್ಳಿ ಮತಕ್ಷೇತ್ರದಲ್ಲಿ ಶಾಲಾ ಕೊಠಡಿ ಮತ್ತು ಶೌಚಾಲಯದ ಕೊರತೆ

716 (63) ಶ್ರೀ ಕಿಮ್ಮನೆ ರತ್ನಾಕರ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ಕ್ಷೇತ್ರದ ಎಷ್ಟು ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಕೊಠಡಿ ಮತ್ತು ಶೌಚಾಲಯಗಳ ಅಗತ್ಯತೆ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ?

ಆ) ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ತೀರ್ಥಹಳ್ಳಿ ಮತ ಕ್ಷೇತ್ರದಲ್ಲಿ ಕೆಳಕಂಡ ಶಾಲೆಗಳಿಗೆ ಕೊಠಡಿ ಹಾಗೂ ಕಟ್ಟಡದ ಅಗತ್ಯತೆ ಇರುತ್ತದೆ.

ಪ್ರಾಥಮಿಕ ಶಾಲೆ: ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಇರೇಗೋಡು, ತೀರ್ಥಹಳ್ಳಿ ತಾ:

ಪ್ರೌಢಶಾಲೆ:

1) ಸರ್ಕಾರಿ ಪ್ರೌಢಶಾಲೆ, ಬಿಳಲುಕೊಪ್ಪ, ತೀರ್ಥಹಳ್ಳಿ ತಾ:
2) ಸರ್ಕಾರಿ ಪ್ರೌಢಶಾಲೆ, ತೂದೂರು, ತೀರ್ಥಹಳ್ಳಿ ತಾ:

ತೀರ್ಥಹಳ್ಳಿ ಮತಕ್ಷೇತ್ರದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶೌಚಾಲಯದ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ.

ಆ) ಡೈಸ್ ಮಾಹಿತಿಯಂತೆ ಮೇಲಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಇರೇಗೋಡು, ತೀರ್ಥಹಳ್ಳಿ ತಾ: ಈ ಶಾಲೆಗೆ ಕಟ್ಟಡದ ಅಗತ್ಯ ಇರುವುದಿಲ್ಲ. ಸದರಿ ಶಾಲಾ ಕಟ್ಟಡ ಶಿಥಿಲಗೊಂಡಿರುವುದರಿಂದ ಕೊಠಡಿ ಅವಶ್ಯಕತೆ ಕಂಡು ಬಂದಿದ್ದು, ಅವಶ್ಯವಿರುವ ಕೊಠಡಿಯನ್ನು ಎಸ್‌ಎಸ್‌ಎ ಅಡಿಯಲ್ಲಿ ನಿರ್ಮಿಸಲು ಕ್ರಮ ವಹಿಸಲಾಗಿರುತ್ತದೆ.

ಮೇಲಿನ 2 ಪ್ರೌಢಶಾಲೆಗಳಿಗೆ ಕ್ರಮವಾಗಿ ಆರ್.ಐ.ಡಿ.ಎಫ್. 13 ಮತ್ತು 16ರಡಿ ಕೊಠಡಿ ನಿರ್ಮಾಣಕ್ಕೆ ಅನುದಾನ ಮಂಜೂರಾಗಿದ್ದು, ನಿವೇಶನ ಸಮಸ್ಯೆ ಕಾರಣ ಕಾಮಗಾರಿ ಪ್ರಾರಂಭಿಸಿರುವುದಿಲ್ಲ. ಸಮಸ್ಯೆ ಪರಿಹರಿಸಲು ಜಿಲ್ಲಾ ಹಂತದಲ್ಲಿ ಕ್ರಮವಹಿಸಲಾಗಿರುತ್ತದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರಾಥಮಿಕ ಶಾಲೆಗಳಿಗೆ ಮೂಲಭೂತ ಸೌಕರ್ಯ

717 (87) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮ ಪಂಚಾಯಿತಿ ಕೇಂದ್ರದಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳೊಂದಿಗೆ ಸಂಚಾರಿ ಪ್ರಾಥಮಿಕ ಶಾಲೆ ಮೂಲಕ ಶಿಕ್ಷಣ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಆ) ಗ್ರಾಮೀಣ ಭಾಗಗಳಲ್ಲಿ ಕಡಿಮೆ ವಿದ್ಯಾರ್ಥಿಗಳನ್ನು ಹೊಂದಿರುವ ಶಾಲೆಗಳನ್ನು ಮುಚ್ಚುತ್ತಿರುವ ಹಿನ್ನೆಲೆಯಲ್ಲಿ ಬಡ, ದಲಿತ ಮತ್ತು ಹಿಂದುಳಿದ ವರ್ಗದವರನ್ನು ಮೂಲಭೂತ ಶಿಕ್ಷಣದಿಂದ ವಂಚಿತರನ್ನಾಗಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರದ ಕ್ರಮವೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ವಿದ್ಯಾರ್ಥಿಗಳ ಸಂಖ್ಯೆ 5 ಕ್ಕಿಂತ ಕಡಿಮೆ ಇರುವ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಹತ್ತಿರದ ಶಾಲೆಯೊಡನೆ ವಿಲೀನಗೊಳಿಸಲಾಗುತ್ತಿದೆ. 1 ಕಿ.ಮೀ ಒಳಗೆ ಶಾಲೆ ಇಲ್ಲದಿದ್ದರೆ, ಅಂತಹ ಶಾಲೆಗಳನ್ನು ವಿಲೀನಗೊಳಿಸುತ್ತಿಲ್ಲ. ವಿಲೀನಗೊಳಿಸಿದ ಶಾಲೆಗಳಿಗೆ ಹೋಗಲು ವಿದ್ಯಾರ್ಥಿಗಳಿಗೆ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ರೂ. 300/– ರಂತೆ ಸಾರಿಗೆ ಭತ್ಯೆ ನೀಡಲಾಗುತ್ತಿದೆ. ಇದರಿಂದ ಮಕ್ಕಳ ಶೈಕ್ಷಣಿಕ ಚಟುವಟಿಕೆಗೆ ತೊಂದರೆಯಾಗದಂತೆ ನೋಡಿಕೊಳ್ಳುವುದು ಸರ್ಕಾರದ ಆಶಯವಾಗಿರುತ್ತದೆ.